ಕಪ್ಪು ಹಲಗೆ ಯೋಜನೆಯಡಿಯ ಶಿಕ್ಷಕರಿಗೆ ವೇತನ ಮಂಜೂರಾತಿ.

1799 - ಡಾ|| ಎಂ. ಪಿ. ಕರ್ಕಿ (ಕುಮಟಾ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಪ್ಪು ಹಲಗೆ ಯೋಜನೆಯಡಿಯಲ್ಲಿ ನಿಯಮಿಸಲ್ಪಟ್ಟ ಶಿಕ್ಷಕರಿಗೆ ಪ್ರತಿ ತಿಂಗಳು ಸರಿಯಾಗಿ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?*

ಇ) *ಈ ಬಗ್ಗೆ ಜಿಲ್ಲಾ ಪರಿಷತ್ತಿನವರು ವೇತನ ಪಾವತಿ ಮಾಡಿ ನಂತರ ಮರು ಪಾವತಿಮಾಡಿಕೊಳ್ಳಲು ಸಾಧ್ಯವಿಲ್ಲವೇ?*

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಕಪ್ಪು ಹಲಗೆ ಕಾರ್ಯಕ್ರಮ ಕೇಂದ್ರ ಪ್ರಾಯೋಜಿತ ಕಾರ್ಯಕ್ರಮವಾಗಿದೆ. ಇದರಡಿಯ ಶಿಕ್ಷಕರ ವೇತನ ಅನುದಾನ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುತ್ತದೆ. ಕೇಂದ್ರ ಸರ್ಕಾರಕ್ಕೆ ಸಕಾಲಿಕ ಅನುದಾನ ಬಿಡುಗಡೆ ಮಾಡುವಂತೆ ಕೋರಿಕೆ ಸಲ್ಲಿಸಲಾಗಿದೆ. ಪ್ರಸ್ತುತ ವೇತನಾನುದಾನ ಬಿಡುಗಡೆ ಕೋರಿ ಕೇಂದ್ರದೊಂದಿಗೆ ಪತ್ರ ವ್ಯವಹಾರನಡೆಸಲಾಗಿದೆ.

ಇ) ಬಹುತೇಕ ಜಿಲ್ಲಾ ಪಂಚಾಯತಿಗಳಲ್ಲಿ ಶಿಕ್ಷಕರ ವೇತನಕ್ಕೆ ತೊಂದರೆಯಾಗದಂತೆ ಕೇಂದ್ರದ ಅನುದಾನವನ್ನು ನಿರೀಕ್ಷಿಸಿ ಈ ರೀತಿಯ ಕ್ರಮವನ್ನು ಅನುಸರಿಸಲಾಗುತ್ತಿದೆ.

ಪಂಚಾಯತ್‌ರಾಜ್ ಕಾಯಿದೆಗೆ ತಿದ್ದುಪಡಿ ಮಸೂದೆ.

1800 - ಡಾ|| ಎಂ. ಪಿ. ಕರ್ಕಿ (ಕುಮಟಾ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಂಚಾಯತ್ ಕಾಯಿದೆಗೆ ಸಮಗ್ರ ತಿದ್ದುಪಡಿ ತರುವ ಮಸೂದೆ ಏನಾದರೂ ಸರ್ಕಾರದ ಮುಂದಿದೆಯೇ?*

ಆ) *ಈ ಕುರಿತು ಪಿ.ಆರ್. ನಾಯಕ್ ಸಮಿತಿ ತನ್ನ ವರದಿಯನ್ನು ಸಲ್ಲಿಸಿದೆಯೇ?*

ಇ) *ಸಲ್ಲಿಸಿದ್ದಲ್ಲಿ ಸರ್ಕಾರ ಈ ವರದಿಯನ್ನು ಒಪ್ಪಿಕೊಂಡಿದೆಯೇ? ಮಸೂದೆಯನ್ನು ಯಾವಾಗ ತರಲಾಗುವುದು?*

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಹೌದು.

ಆ) ಹೌದು.